## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ತುಂಗಳ ಮತ್ತು ಇತರೆ 02 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:** ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ. ಇಲಾಖೆ, ಇವರ ಕಡತ ಸಂ:ಗ್ರಾಕುನೀ&ನೈಇ/ಮುಇಂ/248/ತಾಂತ್ರಿಕ/2021-22

**ಪೀಠಿಕೆ:**

ಮೇಲೆ ಓದಲಾದ ಕಡತದಲ್ಲಿ ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ತುಂಗಳ ಮತ್ತು ಇತರೆ 02 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಗೆ ಜಲಜೀವನ್ ಮಿಷನ್ ಕಾರ್ಯಕ್ರಮದ ಅಡಿಯಲ್ಲಿ **ರೂ.469.00ಲಕ್ಷಗಳ** ಅಂದಾಜಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಕೋರಿರುತ್ತಾರೆ.

ದಿನಾಂಕ:18.08.2021ರ SLSSC ಸಭೆಯಲ್ಲಿ 2021-22ನೇ ಸಾಲಿನ ಜಲಜೀವನ್ ಮಿಷನ್ ಕಾರ್ಯಕ್ರಮದ ಅಡಿಯಲ್ಲಿ ಕ್ರಿಯಾ ಯೋಜನೆಗೆ ಅನುಮೋದನೆ ದೊರಕಿರುತ್ತದೆ (SLSSC ಸಭೆಯಲ್ಲಿ ಮಂಡಿಸಲಾಗಿದ್ದ JJM ಕ್ರಿಯಾ ಯೋಜನೆಯಲ್ಲಿ ಸದರಿ ಕಾಮಗಾರಿಯನ್ನು ಪರಿಗಣಿಸಲಾಗಿರುತ್ತದೆ).

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬಾಗಲಕೋಟೆ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಉದ್ದೇಶಿತ ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಅಂದಾಜು ಮೊತ್ತ **ರೂ.469.00ಲಕ್ಷಗಳಿಗೆ** ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಕುನೀ&ನೈಇ/264/ಗ್ರಾನೀಸ(4)/2021 ಬೆಂಗಳೂರು, ದಿನಾಂಕ:05.10.2021** / 862

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ತುಂಗಳ ಮತ್ತು ಇತರೆ 02 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಗೆ **ರೂ.469.00ಲಕ್ಷ (ನಾಲ್ಕು ನೂರ ಅರವತ್ತೊಂಭತ್ತು ಲಕ್ಷ ರೂಪಾಯಿಗಳು ಮಾತ್ರ)**ಗಳ ಅಂದಾಜು ಮೊತ್ತದಲ್ಲಿ ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ:**

1. Retrofitting ಕಾಮಗಾರಿಗಳಿಗೆ ಪ್ರತಿ ಮನೆಗೆ ಅಂದಾಜು ಮೊತ್ತ ರೂ.15000/- ಮೀರಿದ ಹಾಗೂ Augmentation ಕಾಮಗಾರಿಗಳಿಗೆ ಅವಶ್ಯಕತೆಗೆ ಅನುಗುಣವಾಗಿ Components ಗಳನ್ನು ಪರಿಗಣಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡು ಟೆಂಡರ್ ಕರೆಯುವ ಪೂರ್ವದಲ್ಲಿ ಅಧೀಕ್ಷಕ ಅಭಿಯಂತರರಿಂದ ತಾಂತ್ರಿಕ ಪರಿಶೀಲನೆ ಮಾಡಿಕೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸೂಚಿಸಿದೆ.

2. ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ 15ನೇ ಹಣಕಾಸಿನಡಿ ಅಂದಾಜು ಮೊತ್ತದ 15% ಹಾಗೂ ಸಮುದಾಯ ವಂತಿಕೆ ಅಂದಾಜು ಮೊತ್ತದ 10% ಸಂಗ್ರಹವಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
3. ಕಾಮಗಾರಿಯ ಅನುಷ್ಠಾನದಲ್ಲಿ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳತಕ್ಕದ್ದು ಹಾಗೂ ನಿಗದಿತ ಅವಧಿಯೊಳಗೆ ಕಾರ್ಯಗತಗೊಳಿಸಿ ಪೂರ್ಣಗೊಳಿಸಬೇಕು.
4. ಸದರಿ ಅನುದಾನವನ್ನು ಕರ್ನಾಟಕ ಪಾರದರ್ಶಕ ಕಾಯ್ದೆ-1993 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು-2000, ಕರ್ನಾಟಕ ಆರ್ಥಿಕ ಸಂಹಿತೆ-1958 ಹಾಗೂ ಚಾಲ್ತಿ ನಿಯಮಗಳ ಅನ್ವಯ ಭರಿಸತಕ್ಕದ್ದು.
5. ಕಾಮಗಾರಿಯ ಅನುಷ್ಠಾನದಲ್ಲಿ ಯಾವುದೇ ಬದಲಾವಣೆ ಮಾಡಬೇಕಾದ್ದಲ್ಲಿ ಮಾನ್ಯ ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರಿಂದ ಒಪ್ಪಿಗೆ ಪಡೆಯತಕ್ಕದ್ದು.
6. ಕಾಮಗಾರಿಗೆ ನಿಗದಿಪಡಿಸಿದ ಅನುದಾನವನ್ನು ಬೇರೆ ಕಾಮಗಾರಿಗಳಿಗೆ ಅಥವಾ ಯೋಜನೆಗಳಿಗೆ ವರ್ಗಾಯಿಸತಕ್ಕದ್ದಲ್ಲ.
7. ಕಾಮಗಾರಿಯ ಅನುಷ್ಠಾನದ ಮೂರು ಹಂತದ GPS ಚಿತ್ರಗಳನ್ನು ತೆಗೆದು ನಿರ್ವಹಿಸತಕ್ಕದ್ದು.
8. ಕಾಮಗಾರಿ ಪ್ರಾರಂಭಿಸುವ ಪೂರ್ವದಲ್ಲಿ ಸಂಬಂಧಿಸಿದ ವೃತ್ತ ಕಛೇರಿಯ ಅಧೀಕ್ಷಕ ಅಭಿಯಂತರರವರಿಂದ ತಾಂತ್ರಿಕ ಮಂಜೂರಾತಿ ಪಡೆದುಕೊಳ್ಳತಕ್ಕದ್ದು.
9. ಎಲ್ಲಾ ತಾಂತ್ರಿಕ ಅಂಶಗಳನ್ನು CPHEEO Manual ಹಾಗೂ ಜೆಜೆಎಮ್ ಮಾರ್ಗಸೂಚಿಗಳನ್ವಯ ಪರಿಶೀಲಿಸಿದ ನಂತರ ತಾಂತ್ರಿಕ ಮಂಜೂರಾತಿ ನೀಡತಕ್ಕದ್ದು.
10. ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಮುನ್ನ ಜಲಮೂಲದ ಸುಸ್ಥಿರತೆ ಮತ್ತು ಇತರೆ ಎಲ್ಲಾ ತಾಂತ್ರಿಕ ಅಂಶಗಳು **JJM** ಮಾರ್ಗಸೂಚಿಯನ್ವಯ ಇರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
11. ಕಾಮಗಾರಿಯಲ್ಲಿ ಪರಿಗಣಿಸಿರುವ ಪ್ರಾಕ್ಷೇಪಿತ ಜನಸಂಖ್ಯೆ (Decadal Growth Rate) ಬಗ್ಗೆ ಪರಿಶೀಲಿಸತಕ್ಕದ್ದು.
12. ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಸಂಬಂಧಿಸಿದ ವೃತ್ತ ಕಛೇರಿಯ ಅಧೀಕ್ಷಕ ಅಭಿಯಂತರವರಿಂದ ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು IMISನಡಿ ದಾಖಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

05/10/2024

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ -AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬಾಗಲಕೋಟೆ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.

6. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬಾಗಲಕೋಟೆ.**
10. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಕಛೇರಿ, **ಬೆಳಗಾವಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ, **"ಕರ್ನಾಟಕ ವಿಕಾಸ"**, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಬಾಗಲಕೋಟೆ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.